**ಎರಡನೇಯ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ನ್ಯಾಯಾಲಯ ,**
**ಉಡುಪಿ ಜಿಲ್ಲೆ , ಉಡುಪಿ.**

**ಸೆಷನ್ಸ್ ಕೇಸ್ ನಂಃ 31/2015** **ಅಸಾ.5**

**ಚಾಸಾ.12**

| | | |
|---|---|---|
| ಸಾಕ್ಷಿದಾರರ ಹೆಸರು | - | ಗಣೇಶ್ ದೇವಾಡಿಗ |
| ತಂದೆಯ ಹೆಸರು | - | ರಾಧಾಕೃಷ್ಣ ದೇವಾಡಿಗ |
| ವಯಸ್ಸು | - | 54 ವರ್ಷ |
| ಉದ್ಯೋಗ | - | ಎಚ್.ಸಿ.2060, ಉಡುಪಿ ನಗರ ಠಾಣೆ |
| ವಿಳಾಸ | - | ಉಡುಪಿ |

ದಿನಾಂಕಃ 06.08.2025 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ಸರಕಾರಿ ಅಭಿಯೋಜಕರಿಂದ :**

ನಾನು 2012 ರಿಂದ 2018 ರವರೆಗೆ ಉಡುಪಿ ನಗರ ಪೋಲಿಸ್ ಠಾಣೆಯಲ್ಲಿ ಕರ್ತವ್ಯ ನಿರ್ವಹಿಸಿರುತ್ತೇನೆ. ದಿನಾಂಕ 28-05-2014 ರಂದು ಬೆಳಿಗ್ಗೆ 5-00 ಗಂಟೆಗೆ ನಾನು ಠಾಣಾ ಪ್ರಭಾರದಲ್ಲಿದ್ದಾಗ ಚಾಸಾ1 ಠಾಣೆಗೆ ಹಾಜರಾಗಿ ಕೊಟ್ಟ ಲಿಖಿತ ದೂರನ್ನು ಸ್ವೀಕರಿಸಿ ಅದರ ಆಧಾರದ ಮೇಲೆ ಪ್ರಕರಣ ದಾಖಲಿಸಿ ಪ್ರಥಮ ವರ್ತಮಾನ ವರದಿಯನ್ನು ನ್ಯಾಯಾಲಯಕ್ಕೆ ಹಾಗೂ ಮೇಲಾಧಿಕಾರಿಗಳಿಗೆ ನಿವೇದಿಸಿಕೊಂಡಿರುತ್ತೇನೆ. ಸದ್ರಿ ದೂರನ್ನು ಈಗ ನೋಡುತ್ತಿದ್ದು, ಅದನ್ನು ಈಗಾಗಲೇ ನಿಪಿ-3 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-3(ಬಿ) ಎಂದು ಗುರುತಿಸಲಾಯಿತು. ಪ್ರಥಮ ವರ್ತಮಾನ ವರದಿಯನ್ನು ಈಗ ನೋಡುತ್ತಿದ್ದು, ಅದನ್ನು ನಿಪಿ-5 ಎಂದು ಗುರುತಿಸಲಾಯಿತು. ಪ್ರಕರಣದ ಮುಂದಿನ ತನಿಖೆಯನ್ನು ಚಾಸಾ13 ವಹಿಸಿಕೊಂಡಿರುತ್ತಾರೆ.

**ಪಾಟಿ ಸವಾಲುಃ ಆರೋಪಿ-1 ರವರ ಪರ ಶ್ರೀ ಎಸ್.ಎನ್ ಕೆ.ವಕೀಲರಿಂದಃ**

ಘಟನೆಯ ಬಗ್ಗೆ ಠಾಣೆಗೆ ವಯರ್ ಲೆಸ್ ಮೂಲಕ ರಾತ್ರಿ 1-45 ರ ಸಮಯದಲ್ಲಿ ಮಾಹಿತಿ ಕೊಟ್ಟಿರುತ್ತೇನೆ. ದೂರನ್ನು ಚಾಸಾ1 ಮೊದಲೇ ಬರೆದುಕೊಂಡು ಬಂದಿದ್ದರು. ಸುಳ್ಳು ದೂರನ್ನು ಸ್ವೀಕರಿಸಿ ಸುಳ್ಳು ಪ್ರಕರಣ ದಾಖಲಿಸಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಉಳಿದ ಆರೋಪಿ ಪರ ವಕೀಲರು ಮೇಲಿನ ಪಾಟಿ ಸವಾಲನ್ನು ಅಳವಡಿಸಿಕೊಂಡಿರುತ್ತಾರೆ.**

**ಮರು ವಿಚಾರಣೆಃ** ಇಲ್ಲ

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)

ಓದಿ ಹೇಳಲಾಗಿ ಕೇಳಿ ಸರಿ ಇದೆ ಎಂದು ಒಪ್ಪಿದರು.

2 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಉಡುಪಿ.